ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 15/4/2021

# ತಿಪ್ಪಾರೆಡ್ಡಿಗೆ ಸೋಂಕು ದೃಢ

ಚಿತ್ರದುರ್ಗ: ಬಿಜೆಪಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿಗೆ ಕೊರೊನಾ ಸೋಂಕು ಇರುವುದು ದೃಢಪಟ್ಟಿದೆ. ಸದ್ಯ ಮಣಿಪಾಲ್ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಕಳೆದ ನಾಲ್ಕು ದಿನಗಳ ಹಿಂದೆ



ನೆಹರು ನಗರ ಹಾಗೂ ಇತರೆ ಕಡೆಗಳಲ್ಲಿ ಸ್ನೇಹಿತರ ಮನೆಯಲ್ಲಿ ಔತಣಕೂಟ, ಮದುವೆ ಸಮಾರಂಭಕ್ಕೆ ಹೋಗಿ ಬಂದ ಮೇಲೆ ಗಂಟಲು ನೋವು, ಜ್ವರ ಬಂದಂತಾಯಿತು. ತಕ್ಷಣ ಕೊರೊನಾ ಪರೀಕ್ಷೆ ಮಾಡಿಸಿದರು. ಸೋಮವಾರ ಸಂಜೆ ವರದಿಯಲ್ಲಿ ಪಾಸಿಟಿವ್ ಎಂದು ಬಂದಿದೆ. ವೈದ್ಯರ ಸಲಹೆ ಪಡೆದು ಮಣಿಪಾಲ್ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಈಗ ಆರೋಗ್ಯವಾಗಿದ್ದಾರೆ. ಯಾವುದೇ ತೊಂದರೆ ಇಲ್ಲ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ.

ಕೊರೊನಾ ಆರಂಭದಿಂದಲೂ ಇದುವರೆಗೂ ಜನ ಸಂಪರ್ಕದಲ್ಲಿದ್ದರೂ ಶಾಸಕರಿಗೆ ಕೊರೊನಾ ಸೋಂಕು ತಗುಲಿರಲಿಲ್ಲ. ಆದರೆ ಕೊರೊನಾ 2ನೇ ಅಲೆ ಹೆಚ್ಚಾಗುತ್ತಿದ್ದು ಇದೀಗ ಸೋಂಕಿಗೆ ಒಳಗಾಗಿದ್ದಾರೆ. ಯಾರಿಗೂ ಇಲ್ಲ: ಶಾಸಕರ ಪುತ್ರ ಡಾ.ಸಿದ್ದಾರ್ಥ, ಪತ್ನಿ ಅನುರಾಧ, ಗನ್‌ಮ್ಯಾನ್ ಲಿಂಗರಾಜು, ಆಪ್ತ ಸಹಾಯಕ ಅನಿಲ್ ಸೇರಿದಂತೆ ಶಾಸಕರ ಸಂಪರ್ಕದಲ್ಲಿದ್ದವರು ಕೂಡ ಕೊರೊನಾ ಪರೀಕ್ಷೆ ಮಾಡಿಸಿದ್ದು, ಎಲ್ಲರ ವರದಿ ನೆಗಟಿವ್ ಬಂದಿದೆ.